# ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ

ಬಸವ ಭವನ, ಹೈಗ್ರೌಂಡ್ಸ್, ಬೆಂಗಳೂರು-560001

ಸಂಖ್ಯೆ: ಕರಾಆ/ಆಡಳಿತ/17/2019

ದಿನಾಂಕ: 31.08.2020

## ಅಧಿಕೃತ ಜ್ಞಾಪನ

ವಿಷಯ: **ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಮತ್ತು ಎಲ್ಲಾ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಗಳ ನ್ಯಾಯಿಕ ಕಲಾಪಗಳನ್ನು ಜರುಗಿಸುವ ಬಗ್ಗೆ**

ಉಲ್ಲೇಖ: **ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ಕೋವಿಡ್-19 ಸಂಬಂಧ ವಿವಿಧ ದಿನಾಂಕಗಳಲ್ಲಿ ಹೊರಡಿಸಿರುವ ಅಧಿಕೃತ ಜ್ಞಾಪನ**

- - - -

ರಾಜ್ಯದಲ್ಲಿ ಕೋವಿಡ್-19 ಸೋಂಕು ವ್ಯಾಪಕವಾಗಿ ಹರಡಿರುವ ಹಿನ್ನೆಲೆಯಲ್ಲಿ ಸರ್ಕಾರವು ಕಾಲಕಾಲಕ್ಕೆ ಹೊರಡಿಸಿದ ಮಾರ್ಗಸೂಚಿಗಳನ್ನು ಪಾಲಿಸಿಕೊಂಡು ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಹಾಗೂ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ನ್ಯಾಯಿಕ ಕಲಾಪಗಳ ಸಂಬಂಧವಾಗಿ ತುರ್ತು ಪ್ರಕರಣಗಳನ್ನು ಕೈಗೆತ್ತಿಕೊಂಡು ನಿರ್ವಹಿಸುವಂತೆ ಸೂಚಿಸಲಾಗಿತ್ತು.

ಪ್ರಸ್ತುತ ಸರ್ಕಾರವು ಈ ಹಿಂದೆ ಕೋವಿಡ್-19 ಸಂಬಂಧ ವಿಧಿಸಲಾಗಿದ್ದ ನಿರ್ಬಂಧಗಳಿಗೆ ವಿನಾಯಿತಿ ನೀಡಿರುವುದರಿಂದ ಹಾಗೂ ಸಾರ್ವಜನಿಕ ಸಂಚಾರಕ್ಕೆ ಸಾರಿಗೆ ವ್ಯವಸ್ಥೆಗೆ ಅನುವು ಮಾಡಿಕೊಟ್ಟಿರುವುದರಿಂದ, ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಹಾಗೂ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ನ್ಯಾಯಿಕ ಕಲಾಪಗಳನ್ನು ಈ ಹಿಂದಿನಂತೆ ಯಥಾಪ್ರಕಾರವಾಗಿ ನಡೆಸುವಂತೆ ಹಾಗೂ ಪ್ರಕರಣಗಳನ್ನು ಶೀಘ್ರವಾಗಿ ಇತ್ಯರ್ಥಪಡಿಸುವ ಬಗ್ಗೆ ಕ್ರಮವಹಿಸುವಂತೆ ಸೂಚಿಸಿದೆ.

ಆದಾಗ್ಯೂ ಕಲಾಪವನ್ನು ಜರುಗಿಸುವಾಗ ಮತ್ತು ಕಛೇರಿಯಲ್ಲಿ ಕಡ್ಡಾಯವಾಗಿ ಮುಖಗವಸು ಧರಿಸುವುದು ಹಾಗೂ ಸಾಮಾಜಿಕ ಅಂತರವನ್ನು ಕಾಪಾಡುವುದು. ಜಿಲ್ಲಾ ಆಯೋಗದ ಅಧ್ಯಕ್ಷರು ಹಾಗೂ ಸಹಾಯಕ ರಿಜಿಸ್ಟ್ರಾರ್ ಹಾಗೂ ಸಹಾಯಕ ಆಡಳಿತಾಧಿಕಾರಿಗಳು ಕಲಾಪಗಳಲ್ಲಿ ಹಾಗೂ ಕಛೇರಿಯಲ್ಲಿ ಹೆಚ್ಚಿನ ಜನಸಂದಣಿ ಉಂಟಾಗದಂತೆ ಮುಂಜಾಗ್ರತೆ ವಹಿಸುವುದು ಹಾಗೂ ಪ್ರಕರಣಗಳನ್ನು ಪ್ರತಿನಿಧಿಸುತ್ತಿರುವ ವಕೀಲರನ್ನು / ಪಕ್ಷಕಾರರು ಸ್ವತಃ ಪ್ರತಿನಿಧಿಸುತ್ತಿದ್ದಲ್ಲಿ ಅಂತಹ ಒಬ್ಬ ಅಧಿಕೃತ ಪ್ರತಿನಿಧಿಯನ್ನು ಮಾತ್ರ ಕೋರ್ಟ್ ಕಲಾಪದಲ್ಲಿ ಭಾಗವಹಿಸಲು ಅನುಮತಿಸತಕ್ಕದ್ದು ಹಾಗೂ ಕಲಾಪದ ಸಮಯದಲ್ಲಿ ವಕೀಲರ ಗುಮಾಸ್ತರ ಹಾಗೂ ಪ್ರಕರಣಕ್ಕೆ ಸಂಬಂಧಿಸದ ವ್ಯಕ್ತಿಗಳ ಪ್ರವೇಶವನ್ನು ನಿರ್ಬಂಧಿಸತಕ್ಕದ್ದು.

ಮಾನ್ಯ ಅಧ್ಯಕ್ಷರ ಆದೇಶಾನುಸಾರ,

31/8/20

(ರಾಜು.ಎನ್)

ರಿಜಿಸ್ಟ್ರಾರ್ ಮತ್ತು ಆಡಳಿತಾಧಿಕಾರಿಗಳು,

ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ,

ಬಸವ ಭವನ, ಬೆಂಗಳೂರು.

ಪ್ರತಿಯನ್ನು ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ ಕಳುಹಿಸಿಕೊಡಲಾಗಿದೆ:

1. ಮಾನ್ಯ ನ್ಯಾಯಾಂಗ ಸದಸ್ಯರು ಹಾಗೂ ಮಹಿಳಾ ಸದಸ್ಯರು, ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಪ್ರಧಾನ ಪೀಠ ಹಾಗೂ ಹೆಚ್ಚುವರಿ ಪೀಠ.
2. ಅಧ್ಯಕ್ಷರು, ಸದಸ್ಯರು ಹಾಗೂ ಮಹಿಳಾ ಸದಸ್ಯರು, ಎಲ್ಲಾ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಗಳು.
3. ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು, ಬೆಂಗಳೂರು ವಕೀಲರ ಸಂಘ, ಬೆಂಗಳೂರು ಹಾಗೂ ಇತರೆ ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ಕೇಂದ್ರ ವಕೀಲರ ಸಂಘ (ಜಿಲ್ಲಾ ವೇದಿಕೆ ಮೂಲಕ).
4. ಸಹಾಯಕ ರಿಜಿಸ್ಟ್ರಾರ್ ಹಾಗೂ ಸಹಾಯಕ ಆಡಳಿತಾಧಿಕಾರಿಗಳು, ಎಲ್ಲಾ ಜಿಲ್ಲಾ ಆಯೋಗಗಳು.
5. ಎಲ್ಲಾ ಸಿಬ್ಬಂದಿವರ್ಗದವರಿಗೆ (ರಾಜ್ಯ ಆಯೋಗ ಮತ್ತು ಆಯೋಗಗಳ ಮೂಲಕ).
6. ಕಛೇರಿ ಪ್ರತಿ.